# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದಪ್ರಶ್ನೆ ಸಂಖ್ಯೆ | 50 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 13.12.2021 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ) | ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸಲು ಇರುವ ಅಡೆತಡೆಗಳೇನು; | ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ. 610.00 ಕೋಟಿಗಳ ಅನಾವರ್ತಕ ವೆಚ್ಚ ಹಾಗೂ ವಾರ್ಷಿಕ ರೂ. 60.00 ಕೋಟಿಗಳ ಆವರ್ತಕ ವೆಚ್ಚದ ಅವಶ್ಯಕತೆ ಇರುತ್ತದೆ.<br><br>ಪ್ರಸ್ತುತ ಕೋವಿಡ್ 19 ಹಿನ್ನೆಲೆಯಲ್ಲಿ ಆರ್ಥಿಕ ಮಿತವ್ಯಯದ ಕಾರಣದಿಂದಾಗಿ ವಿಜಯಪುರ ಜಿಲ್ಲೆಯಲ್ಲಿ ಹೊಸ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.<br><br>ಭಾರತದ ಬದಲಾವಣೆಗಾಗಿನ ರಾಷ್ಟ್ರೀಯ ಸಂಸ್ಥೆ ಅಥವಾ ನೀತಿ ಆಯೋಗದಲ್ಲಿ ಪ್ರತಿ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜನ್ನು ಸಾರ್ವಜನಿಕ- ಖಾಸಗಿ ಸಹಭಾಗಿತ್ವದಡಿ ಪ್ರಾರಂಭಿಸಲು ಅವಕಾಶವಿರುತ್ತದೆ. |
| ಇ) | ಸರ್ಕಾರಿ ಕಾಲೇಜು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | |

ಸಂಖ್ಯೆ: ಎಂಇಡಿ 603 ಎಂಎಂಸಿ 2021

(ಡಾ॥ ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು